# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ: 1208/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - | ದಿವಾಕರ್ | ಸಿಡಬ್ಲ್ಯೂ-3 |
| ತಂದೆಯ/ಗಂಡನ ಹೆಸರು | - | ಭೂತಪ್ಪ | ಪಿಡಬ್ಲ್ಯೂ-2 |
| ವಯಸ್ಸು | - | ಸು. 48 ವರ್ಷ | ಪ್ರ.ವ.ಬೋ |
| | | | ದಿನಾಂಕ:16.07.2025 |
| ಉದ್ಯೋಗ | - | ಚಾಲಕರು, ನಗರಸಭೆ, ಹಿರಿಯೂರು. | |
| ವಾಸ | - | ಹಿರಿಯೂರು ನಗರ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ:-**

1. ನಾನು 22 ವರ್ಷಗಳಿಂದ ನಗರಸಭೆ, ಹಿರಿಯೂರಿನಲ್ಲಿ ಚಾಲಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ಚಾಸಾ-1, 2, 4 ರಿಂದ 9 ರವರ ಪರಿಚಯ ಇರುತ್ತದೆ. ಆರೋಪಿ ಪರಿಚಯ ಇರುತ್ತಾರೆ. ದಿನಾಂಕ:08.04.2024 ರಂದು ಆರೋಪಿ ಮತ್ತು ಚಾಸಾ-1 ರವರ ನಡುವೆ ಜಗಳ ಆಗಿರುತ್ತದೆ. ಆರೋಪಿ ಚಾಸಾ-1 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದು ಅವರ ಎಡಗಡೆ ಕಪಾಳಕ್ಕೆ ಕೈಯಿಂದ ಹೊಡೆದಿರುತ್ತಾರೆ ಮತ್ತು ಕೈಕಾಲುಗಳಿಂದ ಹೊಡೆದಿರುತ್ತಾರೆ. ಇದರಿಂದ ಚಾಸಾ-1 ರವರ ಕರ್ತವ್ಯಕ್ಕೆ ಅಡ್ಡಿಯಾಗಿರುತ್ತದೆ. ನಂತರ ನಾನು ಮತ್ತು ಚಾಸಾ-2 ರವರು ಗಲಾಟೆಯನ್ನು ಬಿಡಿಸಿರುತ್ತೇವೆ. ನಂತರ ಚಾಸಾ-1 ರವರು ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿರುತ್ತಾರೆ. ಈ ಕುರಿತು ನಾನು ಪೊಲೀಸ್‌ರ ಮುಂದೆ ಹೇಳಿಕೆ ನೀಡಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸುತ್ತಾರೆ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ–ಸವಾಲುಃ ಮಾನ್ಯ ಎಪಿಪಿಯವರಿಂದಃ–**

3. ನಂತರ ಚಾಸಾ–1 ರವರಿಗೆ ಸೂಳೆಮಗನೇ ಬೋಳಿಮಗನೆ ಎಂದು ಅವಾಚ್ಯ ಶಬ್ಧಗಳಿಂದ ಬೈದಿರುತ್ತಾರೆ ಎಂದರೆ ಸರಿ. ಚಾಸಾ–1 ರವರಿಗೆ ಆರೋಪಿ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ಚಾಸಾ–1 ರವರಿಗೆ ಆರೋಪಿ ಕೈಕಾಲುಗಳಿಂದ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿ. ನಂತರ ನಾನು ಚಾಸಾ–2 ರವರು ಗಲಾಟೆ ಬಿಡಿಸಿರುತ್ತೇವೆ ಎಂದರೆ ಸರಿ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ ಎಸ್.ಟಿ.ಎಸ್. ವಕೀಲರಿಂದಃ–**

4. ನಾನು ಬೆಳಗಿನಜಾವ 5.30 ಕ್ಕೆ ಕರ್ತವ್ಯಕ್ಕೆ ಹಾಜರಾಗಿರುತ್ತೇನೆ. ನಾನು ಮಧ್ಯಾಹ್ನ 12.00 ಗಂಟೆಗೆ ನಗರಸಭೆ ಆವರಣಕ್ಕೆ ಬಂದಿರುತ್ತೇನೆ. ಚಾಸಾ–1 ಮತ್ತು 2 ರವರ ನಡುವೆ ಹಳೇ ದ್ವೇಷಕ್ಕಾಗಿ ಗಲಾಟೆ ನಡೆದಿರುತ್ತದೆ. ಮಧ್ಯಾಹ್ನ 11.00 ರಿಂದ 12.00 ಗಂಟೆವರೆಗೆ ಗಲಾಟೆ ನಡೆದಿರುತ್ತದೆ. ಗಲಾಟೆ ನಡೆದಾಗ ಸುಮಾರು 5–6 ಜನರು ಇದ್ದರು. ನಗರಸಭೆ ಕಛೇರಿಯ ಬಳಿ ನೂರಾರು ಜನರು ಪ್ರತಿನಿತ್ಯ ಬಂದು ಹೋಗುತ್ತಾರೆ ಎಂದರೆ ಸರಿ. ನಾನು ಮತ್ತು ಚಾಸಾ–4 ರಿಂದ 7 ರವರು ಚಾಸಾ–1 ರವರ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತೇವೆ ಎಂದರೆ ಸರಿ. ಚಾಸಾ–1 ರವರು ಪೌರ ಕಾರ್ಮಿಕ ಸಂಘದ ಅಧ್ಯಕ್ಷರಾಗಿದ್ದರು ಎಂದರೆ ಸರಿ.

5. ಗಲಾಟೆ ಯಾವ ರೀತಿ ಆಯಿತು ಎಂದು ನಾನು ಕಣ್ಣಾರೆ ನೋಡಿಲ್ಲ ಎಂದರೆ ಸರಿ. ಆರೋಪಿ ಚಾಸಾ–1 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿ. ಚಾಸಾ–1 ರವರ ಕರ್ತವ್ಯಕ್ಕೆ ಆರೋಪಿ ಅಡ್ಡಿಪಡಿಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ಆರೋಪಿ ಚಾಸಾ–1 ರವರಿಗೆ ಪ್ರಾಣ ಬೆದರಿಕೆ ಹಾಕಿಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು ಪೊಲೀಸ್‌ರ ಮುಂದೆ ಹೇಳಿಕೆ ನೀಡಿದ ಬಗ್ಗೆ ನನಗೆ ನೆನಪಿಲ್ಲ. ನನ್ನ ಹೇಳಿಕೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಆರೋಪಿ ವಿರುದ್ಧ ಚಾಸಾ–1 ರವರ ಮಾತು ಕೇಳಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.